ಕರ್ನಾಟಕ ಸರ್ಕಾರ
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/01/ಇಸಿಎಸ್(2)/2019-20

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ:19-06-2019

**ಸುತ್ತೋಲೆ**

ವಿಷಯ: ತಾಂತ್ರಿಕ ಪರೀಕ್ಷಾ ಮಂಡಳಿಯ C-09 ಪಠ್ಯಕ್ರಮದಲ್ಲಿ ಸಮಾನತೆ ಇಲ್ಲದ 2003 ವರ್ಷದಲ್ಲಿ ಅಳವಡಿಸಲಾದ C-03 ಪಠ್ಯಕ್ರಮದ ವಿಷಯಗಳಿಗೆ 2019 ರ ಅಕ್ಟೋಬರ್/ನವೆಂಬರ್ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗಲು ಅಂತಿಮ ಅವಕಾಶ ನೀಡುವ ಬಗ್ಗೆ.

ಉಲ್ಲೇಖ: ತಾಂತ್ರಿಕ ಪರೀಕ್ಷಾ ಮಂಡಳಿಯ 171ನೇ ಸಭೆಯ ನಿರ್ಣಯ ದಿ:18-06-2019

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2003 ರಲ್ಲಿ ಅಳವಡಿಸಲಾದ C-03 ಪಠ್ಯಕ್ರಮದ ಒಂದು, ಎರಡು, ಮೂರು, ನಾಲ್ಕು, ಐದು ಮತ್ತು ಆರನೇ ಸೆಮಿಸ್ಟರ್‌ನ C-09 ಪಠ್ಯಕ್ರಮದಲ್ಲಿ ಸಮಾನತೆ ಇಲ್ಲದ ಪಠ್ಯ ವಿಷಯಗಳಿಗೆ 2019ರ ಏಪ್ರಿಲ್/ಮೇ ಸೆಮಿಸ್ಟರ್ ಪರೀಕ್ಷೆಯೇ ಅಂತಿಮ ಅವಕಾಶವಾಗಿದ್ದು ನಂತರದ ಮುಂದಿನ ಪರೀಕ್ಷೆಗಳಿಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ ಎಂದು ಎಲ್ಲಾ ಸಂಸ್ಥೆಗಳ ಪ್ರಾಂಶುಪಾಲರುಗಳಿಗೆ ತಿಳಿಸಲಾಗಿತ್ತು.ಆದರೆ ವಿದ್ಯಾರ್ಥಿ/ಪೋಷಕರ ಮನವಿಯ ಮೇರೆಗೆ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯದ ಹಿತದೃಷ್ಟಿಯನ್ನು ಪರಿಗಣಿಸಿ ಸದರಿ ವಿದ್ಯಾರ್ಥಿಗಳಿಗೆ 2019 ರ ಅಕ್ಟೋಬರ್/ನವೆಂಬರ್ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗಲು ಅಂತಿಮ ಅವಕಾಶ ನೀಡಲಾಗಿದೆ. ಇದೇ ಕಟ್ಟಕಡೆಯ ಅವಕಾಶವಾಗಿದ್ದು ನಂತರದ ಮುಂದಿನ ಪರೀಕ್ಷೆಗಳಿಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲವೆಂದು ತಿಳಿಸಲಾಗಿದೆ.

ಸಮಾನತೆ ಇಲ್ಲದ ಪ್ರತಿ ವಿಷಯಕ್ಕೆ ವಿದ್ಯಾರ್ಥಿಯಿಂದ ರೂ.1000/- ವಿಶೇಷ ಶುಲ್ಕವನ್ನು ಪಡೆಯುವುದು ಹಾಗೂ ವಿವಿಧ ಹಂತಗಳಲ್ಲಿ ಚಾಲ್ತಿಯಲ್ಲಿರುವ ಪರೀಕ್ಷಾ ಶುಲ್ಕಗಳ ಅಧಿಸೂಚನೆಯನುಸಾರ ದಂಡ ಶುಲ್ಕ ಸಹಿತವಾಗಿ ಪರೀಕ್ಷಾ ಶುಲ್ಕ ಪಡೆಯಲು ಸಂಬಂಧಿಸಿದ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಸೂಚಿಸಲಾಗಿದೆ.

ಈ ವಿಷಯವನ್ನು ಎಲ್ಲಾ ವಿದ್ಯಾರ್ಥಿಗಳು, ಉಪನ್ಯಾಸಕರು ಮತ್ತು ಸಿಬ್ಬಂದಿ ವರ್ಗದವರ ಗಮನಕ್ಕೆ ತರುವಂತೆ ಮತ್ತು ಸಂಸ್ಥೆಯ ಸೂಚನಾ ಫಲಕದಲ್ಲಿ/ಸ್ಥಳೀಯ ದಿನಪತ್ರಿಕೆಗಳಲ್ಲಿ ಪ್ರಚುರಪಡಿಸಲು ತಿಳಿಸಲಾಗಿದೆ.

ಈ ಸುತ್ತೋಲೆಯನ್ನು ವಿದ್ಯಾರ್ಥಿಗಳ ವಿಳಾಸಕ್ಕೆ ತಪ್ಪದೇ ರಿಜಿಸ್ಟರ್ಡ್ ಅಂಚೆಯ ಮೂಲಕ ಕಳುಹಿಸಿ ದಾಖಲೆಯನ್ನು ಸಹ ಸಂಗ್ರಹಿಸಿಡಲು ಸೂಚಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದಲ್ಲಿನ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿ ಮತ್ತು ಮುಂದಿನ ಅಗತ್ಯ ಕ್ರಮಕ್ಕಾಗಿ.

ಪ್ರತಿ,

1) ಇ – ಗವರ್ನೆನ್ಸ್ ವಿಭಾಗಕ್ಕೆ – ವೆಬ್ ಸೈಟ್‌ನಲ್ಲಿ ಪ್ರಕಟಿಸಲು
2) ಗಣಕ ಕೇಂದ್ರಕ್ಕೆ - ವೆಬ್ ಸೈಟ್‌ನಲ್ಲಿ ಪ್ರಕಟಿಸಲು
3) ಕಾರ್ಯದರ್ಶಿಯವರ ಆಪ್ತ ಶಾಖೆ 4) ಕಡತಕ್ಕೆ